**Bangalore**
**Regional News**
**26.08.2024 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯಾದ್ಯಂತ ಇಂದು ಶ್ರೀಕೃಷ್ಣ ಜನ್ಮಾಷ್ಟಮಿ ಆಚರಣೆ; ಮಕ್ಕಳಿಗೆ ರಾಧಾ-ಕೃಷ್ಣ ವೇಷ ಹಾಕಿ ಸಂಭ್ರಮಿಸಿದ ಪೋಷಕರು

೨. ನಾಳೆ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ನೇಮಕಕ್ಕಾಗಿ ಪರೀಕ್ಷೆ; ಕರ್ನಾಟಕ ಲೋಕಸೇವಾ ಆಯೋಗದಿಂದ ಸಕಲ ಸಿದ್ಧತೆ

೩. ನಟ ದರ್ಶನ್‌ಗೆ ರಾಜಾತಿಥ್ಯ ಸಂಬಂಧ ಏಳು ಮಂದಿ ಜೈಲು ಅಧಿಕಾರಿ, ಸಿಬ್ಬಂದಿ ಅಮಾನತು

೪. ತುಂಗಾ ಮೇಲ್ದಂಡೆ ಯೋಜನೆ ಮುಖ್ಯ ಕಾಲುವೆ ಅಭಿವೃದ್ಧಿಗೆ ಸರ್ಕಾರದಿಂದ ಅನುಮತಿ

<><*<><>*><>

ಶ್ರೀಕೃಷ್ಣನ ಜನ್ಮದಿನವಾದ ಜನ್ಮಾಷ್ಟಮಿಯನ್ನು ಇಂದು ರಾಜ್ಯಾದ್ಯಂತ ಆಚರಿಸಲಾಗುತ್ತಿದೆ. ದೇವಾಲಯಗಳಿಗೆ ತೆರಳಿ ಶ್ರೀಕೃಷ್ಣನಿಗೆ ಭಕ್ತರು ಪೂಜೆ ಸಲ್ಲಿಸುತ್ತಿದ್ದಾರೆ. ನಾಡಿನ ಜನತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಗಣ್ಯರು ಶ್ರೀ ಕೃಷ್ಣ ಜನ್ಮಾಷ್ಟಮಿ ಹಬ್ಬದ ಶುಭಕೋರಿದ್ದಾರೆ. ಕೋಲಾರ ಜಿಲ್ಲೆಯಾದ್ಯಂತ ಹಬ್ಬವನ್ನು ಅತ್ಯಂತ ಸಡಗರದಿಂದ ಆಚರಿಸಲಾಗುತ್ತಿದೆ. ತಾಯಂದಿರು ಮಕ್ಕಳಿಗೆ ಶ್ರೀ ಕೃಷ್ಣನ ವೇಷ ಹಾಕಿ ಸಂಭ್ರಮಿಸಿದರು. ಜಿಲ್ಲೆಯ ಮುಳಬಾಗಿಲು ತಾಲೂಕಿನ ವಿಠಲೇಶ್ವರ ಪಾಳ್ಯದಲ್ಲಿರುವ ಒಂದು ಸಾವಿರದ ೫೦೦ ವರ್ಷಗಳ ಇತಿಹಾಸವಿರುವ ಕೃಷ್ಣಾನಂದ ಮಠದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ವಿಶೇಷ ಪೂಜಾ- ಕೈಂಕರ್ಯ ಹಮ್ಮಿಕೊಳ್ಳಲಾಗಿತ್ತು. ಇಂದು ಬೆಳಗ್ಗೆ ಶ್ರೀ ಗೋಪಾಲಕೃಷ್ಣ ದೇವರಿಗೆ ಪಂಚಾಮೃತ ಅಭಿಷೇಕ, ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಗುಜರಾತಿನ ದ್ವಾರಕಾ ಮಠದ ಪರಂಪರೆಯನ್ನು ಈ ಮಠ ಹೊಂದಿದೆ. ಬುಕ್ಕರಾಯರ ಕಾಲದಲ್ಲಿ ಕೃಷ್ಣಾನಂದ ಮಠ ನಿರ್ಮಾಣವಾಗಿದ್ದು, ಶ್ರೀಕೃಷ್ಣಾನಂದ ತೀರ್ಥರು ಪ್ರತಿಷ್ಠಾಪಿಸಿರುವ ಶ್ರೀ ಗೋಪಾಲಕೃಷ್ಣ ವಿಗ್ರಹ ಎಲ್ಲರನ್ನು ಆಕರ್ಷಿಸುತ್ತಿದೆ. ದಾವಣಗೆರೆ ಜಿಲ್ಲಾದ್ಯಂತ ಇಂದು ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಆಚರಿಸಲಾಯಿತು. ಜಿಲ್ಲಾಡಳಿತ ಭವನದಲ್ಲಿ ನಡೆದ ಮುಖ್ಯ ಕಾರ್ಯಕ್ರಮದಲ್ಲಿ

ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಅವರು ಶ್ರೀ ಕೃಷ್ಣ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮುರಾರಿಯ ಲೀಲೆಗಳ ಬಗ್ಗೆ ತಿಳಿಸಿದರು. ಇದೇ ವೇಳೆ ಜಿಲ್ಲಾದ್ಯಂತ ಶಾಲೆಗಳು ಮತ್ತು ಬಾಲವಾಡಿಗಳಲ್ಲಿ ಚಿಣ್ಣರಿಗೆ ಕೃಷ್ಣ-ರಾಧೆಯರ ವೇಷಭೂಷಣ ತೊಡಿಸಿ ಪೋಷಕರು ಸಂಭ್ರಮಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ಕೃಷ್ಣ ಜನ್ಮಾಷ್ಟಮಿಯನ್ನು ಶ್ರದ್ಧಾ ಭಕ್ತಿಗಳಿಂದ ಆಚರಿಸಲಾಗುತ್ತಿದೆ. ಜಿಲ್ಲೆಯ ಶ್ರೀ ಕೃಷ್ಣ ಹಾಗೂ ವೇಣುಗೋಪಾಲ ದೇವಾಲಯಗಳಲ್ಲಿ ವಿಶೇಷ ಅಲಂಕಾರ ಹಾಗೂ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಹಲವೆಡೆ ಕೃಷ್ಣ ರಾಧೆ ವೇಷಧಾರಿಗಳ ಪ್ರದರ್ಶನ ಮತ್ತು ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಪುಟಾಣಿ ಮಕ್ಕಳು ಕೃಷ್ಣ ರಾಧೆ ವೇಷ ಧರಿಸಿ, ಗಮನ ಸೆಳೆದರು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಶಾಸಕ ಧೀರಜ್ ಮುನಿರಾಜು, ಶ್ರೀ ಕೃಷ್ಣನ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಇಂದು ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಸಂಭ್ರಮ ಸಡಗರದಿಂದ ಆಚರಿಸಲಾಗುತ್ತಿದೆ. ಮುದ್ದು ಕಂದಮ್ಮಗಳಿಗೆ ಶ್ರೀ ಕೃಷ್ಣನ ವೇಷ ಹಾಕಿ ಪೋಷಕರು ಸಂಭ್ರಮಿಸಿದರು. ವಿವಿಧ ಸಂಘಟನೆಗಳ ಮೂಲಕ ಶ್ರೀಕೃಷ್ಣ ವೇಷ ಸ್ಪರ್ಧೆಗಳೂ ನಡೆಯುತ್ತಿವೆ. ಮಂಗಳೂರಿನ ಕದ್ರಿ ಶ್ರೀ ಮಂಜುನಾಥ ದೇವಸ್ಥಾನದ ರಾಜಾಂಗಣದಲ್ಲಿ 'ರಾಷ್ಟ್ರೀಯ ಮಕ್ಕಳ ಉತ್ಸವ' ಶ್ರೀಕೃಷ್ಣ ವೇಷ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು, ನೂರಾರು ಶ್ರೀಕೃಷ್ಣ ವೇಷಧಾರಿ ಪುಟಾಣಿಗಳು ಭಾಗವಹಿಸಿದ್ದಾರೆ.

<><*<><>*><>

ನಾಳೆ ಕರ್ನಾಟಕ ಲೋಕಸೇವಾ ಆಯೋಗದ ಗೆಜೆಟೆಡ್ ಪ್ರೊಬೆಷನರಿ ಗ್ರೂಪ್ ಎ ಮತ್ತು ಬಿ ವೃಂದಕ್ಕಾಗಿ ಪರೀಕ್ಷೆ ನಡೆಯಲಿದ್ದು, ಇದಕ್ಕಾಗಿ ಆಯೋಗ ಅಗತ್ಯ ಸಿದ್ಧತೆಗಳನ್ನು ಕೈಗೊಂಡಿದೆ. ಕೋಲಾರದಲ್ಲಿ ಪರೀಕ್ಷೆ ಪಾರದರ್ಶಕ ಹಾಗೂ ನಕಲು ಮುಕ್ತವಾಗಿ ನಡೆಸಲು ಕಟ್ಟುನಿಟ್ಟಿನ ಕ್ರಮ ವಹಿಸುವಂತೆ ಕೋಲಾರ ಜಿಲ್ಲಾಧಿಕಾರಿ ಅಕ್ರಂ ಪಾಷ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲೆಯಲ್ಲಿ ೧೨ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ೪ ಸಾವಿರದ ೪೨೨ ಅಭ್ಯರ್ಥಿಗಳು ಪರೀಕ್ಷೆಯನ್ನು ಬರೆಯಲಿದ್ದು, ಯಾವುದೇ ಅಕ್ರಮ ಚಟುವಟಿಕೆಗಳು ನಡೆಯದಂತೆ ಅಗತ್ಯ ಕ್ರಮಗಳನ್ನು ವಹಿಸಲಾಗಿದೆ. ಬೇರೆ ಬೇರೆ ಜಿಲ್ಲೆಗಳಿಂದ ಪರೀಕ್ಷೆ ಬರೆಯಲು ಆಗಮಿಸುವ ಅಭ್ಯರ್ಥಿಗಳಿಗೆ ಪರೀಕ್ಷೆ ಬರೆಯಲು ಯಾವುದೇ ಅಡಚಣೆಯಾಗದಂತೆ ೪ ಸ್ಥಳಗಳಲ್ಲಿ ಊಟ, ವಸತಿ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಈ ವ್ಯವಸ್ಥೆ ಸೂಕ್ತವಾಗಿ ಕಲ್ಪಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><*<><>*><>

ಹಾವೇರಿಯ ೧೧ ಪರೀಕ್ಷಾ ಕೇಂದ್ರಗಳಲ್ಲಿ ನಾಳೆ ಕರ್ನಾಟಕ ಲೋಕಸೇವಾ ಆಯೋಗದ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಭರ್ತಿಗೆ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆ ನಡೆಯುವ ಕೇಂದ್ರಗಳಲ್ಲಿರುವ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಪಾರದರ್ಶಕ ಮತ್ತು ಸುಸೂತ್ರವಾಗಿ ಪರೀಕ್ಷೆ ನಡೆಸಲು ಪರೀಕ್ಷಾ ಕೇಂದ್ರಗಳ ಶಾಲಾ-ಕಾಲೇಜುಗಳಿಗೆ ಹಾಗೂ ಇವುಗಳ ಆವರಣದಲ್ಲಿರುವ ವಿದ್ಯಾ ಸಂಸ್ಥೆಗಳಿಗೆ ನಾಳೆ ಒಂದು ದಿನ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

<><*<><>*><>

ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್‌ಗೆ ರಾಜಾತಿಥ್ಯ ನೀಡಿದ ವಿಚಾರಕ್ಕೆ ಸಂಬಂಧಿಸಿದಂತೆ ಏಳುಮಂದಿ ಜೈಲು ಅಧಿಕಾರಿ, ಸಿಬ್ಬಂದಿಯನ್ನು ಅಮಾನತು ಮಾಡಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದರು. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೈಲರ್ ಶರಣಬಸವ ಅಮೀನಗಢ, ಸಹಾಯಕ ಜೈಲರ್ ಪುಟ್ಟಸ್ವಾಮಿ, ಜೈಲ್ ಹೆಡ್ ವಾರ್ಡರ್‌ಗಳಾದ ವೆಂಕಪ್ಪ, ಸಂಪತ್, ವಾರ್ಡರ್‌ಗಳಾದ ಬಸಪ್ಪ, ಪ್ರಭು, ಶ್ರೀಕಾಂತ್ ಅವರನ್ನು ಅಮಾನತು ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಘಟನೆ ಹಿನ್ನೆಲೆಯಲ್ಲಿ ಹಿರಿಯ ಅಧಿಕಾರಿಗಳ ವಿರುದ್ಧವೂ ಸಹ ತನಿಖೆ ನಡೆಯುತ್ತಿದೆ. ಮುಂದೆ ಇಂತಹ ಘಟನೆಗಳು ನಡೆಯದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದರು. ಇನ್ನೊಂದೆಡೆ, ಜೈಲಿನಲ್ಲಿ ನಟ ದರ್ಶನ್ ಹಾಗೂ ಮತ್ತಿತರರಿಗೆ ರಾಜಾತಿಥ್ಯ ಒದಗಿಸುತ್ತಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ದರ್ಶನ್ ಮತ್ತು ಇತರರನ್ನು ಕೂಡಲೇ ಬೇರೆ ಬೇರೆ ಕಾರಾಗೃಹಗಳಿಗೆ ಸ್ಥಳಾಂತರ ಮಾಡುವಂತೆ ನಿರ್ದೇಶಿಸಿದ್ದಾರೆ. ಅಲ್ಲದೆ, ಪ್ರಕರಣದ ಬಗ್ಗೆ ಸಂಪೂರ್ಣ ವರದಿ ನೀಡುವಂತೆ ಅವರು ರಾಜ್ಯ ಪೊಲೀಸ್ ಮಹಾ ನಿರ್ದೇಶಕರಿಗೆ ಸೂಚಿಸಿದ್ದಾರೆ.

<><*<><>*><>

ಹಾವೇರಿ ಜಿಲ್ಲೆ ರಟ್ಟೀಹಳ್ಳಿ ತಾಲೂಕಿನಲ್ಲಿ ಹಾದುಹೋಗಿರುವ ತುಂಗಾ ಮೇಲ್ದಂಡೆ ಯೋಜನೆ ಮುಖ್ಯ ಕಾಲುವೆಯನ್ನು ೩೯.೪೩ ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಸರ್ಕಾರದಿಂದ ಅನುಮತಿ ದೊರೆತಿದೆ ಎಂದು ಶಾಸಕ ಯು.ಬಿ.ಬಣಕಾರ ತಿಳಿಸಿದ್ದಾರೆ. ರಟ್ಟೀಹಳ್ಳಿ ತಾಲೂಕಿನ ಜೋಕನಾಳದ ಐತಿಹಾಸಿಕ ಭಗವತಿ ಕೆರೆಗೆ ಬಾಗಿನ ಅರ್ಪಿಸಿ ಮಾತನಾಡಿದ ಅವರು, ತುಂಗಾ ಮೇಲ್ದಂಡೆ ಮುಖ್ಯ ಕಾಲುವೆ ನಿರ್ವಹಣೆ ಹಾಗೂ ಸರ್ವಿಸ್ ರಸ್ತೆ ನಿರ್ಮಿಸುವುದು ಯೋಜನೆಯಲ್ಲಿ ಸೇರಿಸಲಾಗಿದೆ. ಐತಿಹಾಸಿಕ ಭಗವತಿ ಕೆರೆಯ ವಿಸ್ತೀರ್ಣ ಗುರುತಿಸಿ ಬಿಗಿ ಭದ್ರತೆ ಮೂಲಕ ಕೆರೆಯ

ಹೂಳೆತ್ತಲಾಗುವುದು ಎಂದರು. ಮುಂದಿನ ಒಂದು ತಿಂಗಳಲ್ಲಿ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು, ಗ್ರಾಮದ ನಾಗರೀಕರೊಂದಿಗೆ ಚರ್ಚಿಸಿ ಕೆರೆಯ ಸಮಗ್ರ ಅಭಿವೃದ್ಧಿ ಜೊತೆಗೆ ಪ್ರವಾಸಿ ತಾಣವನ್ನಾಗಿಸಲು ಯೋಜನೆ ಸಿದ್ಧಪಡಿಸಲಾಗುವುದು ಎಂದು ಹೇಳಿದರು.

<><*<><>*><>

ಕೇಂದ್ರ ಸರಕಾರದಿಂದ ದಾಳಿಂಬೆ ಕ್ಲಸ್ಟರ್ ಅಭಿವೃದ್ಧಿಯ ಯೋಜನೆಗೆ ರಾಜ್ಯದ ಒಂಬತ್ತು ತಾಲೂಕುಗಳನ್ನು ಆಯ್ಕೆ ಮಾಡಲಗಿದೆ ಎಂದು ಚಿತ್ರದುರ್ಗ ಜಿಲ್ಲಾ  ತೋಟಗಾರಿಕಾ ಇಲಾಖೆ ಉಪನಿರ್ದೇಶಕ ಶರಣ ಬಸಪ್ಪಯೋಗಿ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು, ಚಿತ್ರದುರ್ಗ ಜಿಲ್ಲೆಯ ಹಿರಿಯೂರು, ಹೊಸದುರ್ಗ, ಹೊಳಲ್ಕೆರೆ, ಚಳ್ಳಕೆರೆ, ಮೊಳಕಾಲ್ಮೂರು ಮತ್ತು ಚಿತ್ರದುರ್ಗ ತಾಲೂಕು ಹಾಗೂ ವಿಜಯನಗರ ಜಿಲ್ಲೆಯ ಕೂಡ್ಲಿಗಿ ಮತ್ತು ಹಗರಿಬೊಮ್ಮನಹಳ್ಳಿ, ತುಮಕೂರು ಜಿಲ್ಲೆಯ ಶಿರಾ ತಾಲೂಕುಗಳನ್ನು ಈ ಯೋಜನೆಯಲ್ಲಿ ಸೇರಿಸಲಾಗಿದೆ ಎಂದರು.ಅಸೋಸಿಯೇಟೆಡ್ ಇಂಡಸ್ಟ್ರಿಯಲ್ ಕಾರ್ಪೋರೇಷನ್ ಸಂಸ್ಥೆ ಸಹಕಾರದೊಂದಿಗೆ ಯೋಜನೆಯನ್ನು ಕಾರ್ಯಗತಗೊಳಿಸಲಾಗುವುದು. ಈ ಯೋಜನೆಯು ಐದು ವರ್ಷ ಅವಧಿಯದ್ದಾಗಿದೆ. ಒಂಬತ್ತು ತಾಲೂಕುಗಳಲ್ಲಿ ಒಂದು ೫೦೦ ಎಕರೆ ವಿಸ್ತೀರ್ಣದಲ್ಲಿ ದಾಳಿಂಬೆ ಬೆಳೆಯಲು ಉತ್ತೇಜಿಸಲಾಗಿದೆ. ಈ ಯೋಜನೆಗಾಗಿ ಸುರಕ್ಷಾ ಆಪ್ ಅಭಿವೃದ್ಧಿಪಡಿಸಲಾಗಿದೆ. ಇದರಲ್ಲಿ ರೈತರು ನೋಂದಣಿ ಮಾಡಿಕೊಂಡು, ಈ ಯೋಜನೆಯ ಫಲಾನುಭವಿಗಳಾಗಬಹುದು ಎಂದು ಮಾಹಿತಿ ನೀಡಿದರು.  ಈ ಯೋಜನೆಯಡಿ ಮಣ್ಣು ಮತ್ತು ನೀರಿನ ಪರೀಕ್ಷೆ, ದಾಳಿಂಬೆ ಸಸಿ ವಿತರಣೆ, ರಸಗೊಬ್ಬರ, ಔಷಧ, ಟ್ರಾಕ್ಟರ್, ಟಿಲ್ಲರ್ ಮತ್ತು ಅತ್ಯಾಧುನಿಕ ಸಲಕರಣೆ ವಿತರಣೆ, ಹನಿ ನೀರಾವರಿ, ಸಣ್ಣ ನೀರಾವರಿ ಪದ್ಧತಿ, ರೈತರಿಗೆ ಸಾಲ, ತರಬೇತಿ, ಬ್ರಾಂಡಿಂಗ್ ಮತ್ತು ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿಲಾಗುವುದು ಎಂದು ವಿವರಿಸಿದರು.

<><*<><>*><>

ಯಾದಗಿರಿ ಜಿಲ್ಲೆಗೆ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಕೊನೆಯ ಸ್ಥಾನ ಬಂದಿದ್ದು, ಆದರೂ ಜಿಲ್ಲೆಯ ವಿದ್ಯಾರ್ಥಿಗಳು ಫಲಿತಾಂಶದಲ್ಲಿ ಶೇಕಡ ೫೦ ರ? ವಿದ್ಯಾರ್ಥಿಗಳು ೯೦ಕ್ಕೂ ಹೆಚ್ಚು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿರುವುದು ಸಂತೋಷದ ಸಂಗತಿ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಹೇಳಿದರು. ಯಾದಗಿರಿ ನಗರದ ಜಿಲ್ಲಾ ಪಂಚಾಯಿತಿ ಸಂಭಾಗಣದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕೇಂದ್ರ ಸಂಘ ಹಾಗೂ ಜಿಲ್ಲಾ ಘಟಕ ವತಿಯಿಂದ ಹಮ್ಮಿಕೊಂಡಿದ್ದ ೨೦೨೩-೨೪ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಹಾಗೂ ಸದಸ್ಯರ ಸಾಮಾನ್ಯ ಸಭೆ ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಕರು, ಪೋ?ಕರ

ಮಾರ್ಗದರ್ಶನದಿಂದ ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಗಳಿಸಲು ಸಾಧ್ಯವಾಗಿದೆ. ಸರ್ಕಾರಿ ನೌಕರರು ಜಿಲ್ಲೆಯಲ್ಲಿ ಅತಿಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನ ಮಾಡುತ್ತಿರುವುದು ಶ್ಲಾಘನೀಯ. ಇದರಿಂದ ವಿದ್ಯಾರ್ಥಿಗಳಲ್ಲಿ ಉತ್ಸುಕತೆ ಹೆಚ್ಚಾಗಲಿದೆ. ಮುಂದಿನ ಉನ್ನತ ಅಭ್ಯಾಸಕ್ಕೆ ಪ್ರೇರಣೆಯಾಗಲಿದೆ ಎಂದು ಹೇಳಿದರು.

**<><*<><>*><>**

ಕಾಳಿನದಿ ಯೋಜನೆಯ ಸೂಪಾ ಅಣೆಕಟ್ಟೆಯ ಜಲಾನಯನ ಪ್ರದೇಶದಲ್ಲಿ ಸತತವಾಗಿ ಮಳೆ ಬೀಳುತ್ತಿದ್ದು, ಜಲಾಶಯಕ್ಕೆ ಹೇರಳವಾಗಿ ನೀರುಹರಿದು ಬರುತ್ತಿರುವುದರಿಂದ ಜಲಾಶಯದ ನೀರಿನ ಮಟ್ಟವು ಸತತವಾಗಿ ಏರುತ್ತಿದ್ದು, ಯಾವುದೇ ಸಮಯದಲ್ಲಿ ಜಲಾಶಯದಿಂದ ಹೆಚ್ಚುವರಿ ನೀರನ್ನು ಹೊರಬಿಡಲಾಗುವುದು ಎಂದು ಕೆಪಿಸಿ ಅಧಿಕಾರಿಗಳು ಸೂಚನೆ ನೀಡಿದ್ದಾರೆ. ಸೂಪಾ ಜಲಾಶಯದ ಗರಿಷ್ಠ ಮಟ್ಟವು ೫೬೪ ಮೀಟರ್ ಆಗಿದ್ದು, ಸದ್ಯ ಜಲಾಶಯದ ನೀರಿನ ಮಟ್ಟವು ೫೫೯ ಮೀಟರಗಳಾಗಿದೆ. ಜಲಾಶಯದ ಒಳಹರಿವು  ೨೫,೯೫೪ ಕ್ಯೂಸೆಕ್ ಆಗಿರುತ್ತದೆ. ಇದೇ ರೀತಿಯಲ್ಲಿ ಜಲಾಶಯಕ್ಕೆ ನೀರಿನ ಒಳಹರಿವು ಮುಂದುವರೆದ ಪಕ್ಷದಲ್ಲಿ ಜಲಾಶಯವು ಗರಿಷ್ಠ ಮಟ್ಟ ತಲುಪುವ ಸಾಧ್ಯತೆ ಇದೆ. ಆದ್ದರಿಂದ ಆಣೆಕಟ್ಟು ಸುರಕ್ಷತಾ ದೃಷ್ಟಿಯಿಂದ ಹೆಚ್ಚುವರಿಯಾದ ಜಲಾಶಯದ ನೀರನ್ನು ಯಾವುದೇ ಸಮಯದಲ್ಲಿ ಹೊರಬಿಡಲಾಗುವುದು ಎಂದು ಕೆಪಿಸಿಎಲ್ ಕಾರ್ಯ ನಿರ್ವಾಹಕ ಅಭಿಯಂತರರು  ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಹಂಪಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಡ್ಡಿರಾಂಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ 'ತಾಯಿಯ ಹೆಸರಿನಲ್ಲಿ ಒಂದು ಗಿಡ' ನೆಡುವ ಅಭಿಯಾನವನ್ನು ತಾಲೂಕು ಪಂಚಾಯತಿ, ಸಾಮಾಜಿಕ ಅರಣ್ಯ ಹಾಗೂ ತೋಟಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಲಾಗಿತ್ತು. ಜಿಲ್ಲಾ ಪಂಚಾಯತ್‌ನ ಕಾರ್ಯದರ್ಶಿ ಭೀಮಪ್ಪ ಲಾಳಿ ಗಿಡ ನೆಡುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**